KARNATAK UNIVERSITY, DHARWAD

EXAMINATION SECTION, K.U.DHARWAD

Registrar (Evaluation) 0836-2215375

Ref: No.KU/Exam/RVCell/2026/01 Date: 29/10/2026

ಸುತ್ತೋಲೆ

ವಿಷಯ:- UUCMS ಅಡಿಯಲ್ಲಿ ಪ್ರಕಟಿಸಲಾದ July/Aug - 2026 ರ ಸ್ನಾತಕೋತ್ತರ (PG) 2 ಹಾಗೂ 4 ನೇ ಸೆಮಿಸ್ಟರ್ ಪರೀಕ್ಷಾ ಫಲಿತಾಂಶದ ಉತ್ತರ ಪತ್ರಿಕೆಗಳ ಮರು ಮೌಲ್ಯಮಾಪನಕ್ಕೆ ಅರ್ಜಿಸಲ್ಲಿಸುವ ಕುರಿತು.

ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಟ್ಟ ಸಂಲಗ್ನ ಮಹಾವಿದ್ಯಾಲಯ/ವಿಭಾಗದ ಮುಖ್ಯಸ್ಥರುಗಳ ಗಮನಕ್ಕೆ ತರಬಯಸುವುದೇನೆಂದರೆ July/Aug - 2026 ರ ಸ್ನಾತಕೋತ್ತರ (PG) 2 ಹಾಗೂ 4 ನೇ ಸೆಮಿಸ್ಟರ್ ಪರೀಕ್ಷಾ ಫಲಿತಾಂಶವನ್ನು ಈಗಾಗಲೇ UUCMS ನಲ್ಲಿ ಪ್ರಕಟಿಸಲಾಗಿರುತ್ತದೆ. ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ದಿನಾಂಕ: **30-10-2026** ರಿಂದ **02-11-2026** ರ ವರೆಗೆ ಛಾಯಾ ಪ್ರತಿಗಳಿಗಾಗಿ ಹಾಗೂ ದಿನಾಂಕ: **06-11-2026** ರಿಂದ **12-11-2026** ರ ವರೆಗೆ ಮರು ಮೌಲ್ಯಮಾಪನಕ್ಕಾಗಿ ಈ ದಿನಾಂಕಗಳ ಅವಧಿಯಲ್ಲಿ ವಿದ್ಯಾರ್ಥಿಗಳು ತಮ್ಮ **UUCMS Portal** ನ ಮುಖಾಂತರ ಶುಲ್ಕವನ್ನು ಭರಿಸಿ ತಮ್ಮ ಮಹಾವಿದ್ಯಾಲಯ/ವಿಭಾಗದ ಮುಖಾಂತರ (ಹಾರ್ಡ ಪ್ರತಿ) ಕ.ವಿ.ವಿ. ಪರೀಕ್ಷಾ ವಿಭಾಗದ ಮರು ಮೌಲ್ಯಮಾಪನ ವಿಭಾಗಕ್ಕೆ ಸಲ್ಲಿಸಲು ಸೂಚಿಸಿದೆ.

ಶುಲ್ಕದ ವಿವರ:

i.	ಮರು ಮೌಲ್ಯಮಾಪನಕ್ಕೆ ಪ್ರತಿ ಉತ್ತರ ಪತ್ರಿಕೆಗೆ	ರೂ. 715=00
ii.	ಛಾಯಾ ಪ್ರತಿಯ ಪ್ರತಿ ಉತ್ತರ ಪತ್ರಿಕೆಗೆ	ರೂ. 178=00
iii.	ಅಂಕಗಳ ಮರು ಎಣಿಕೆಗಾಗಿ ಪ್ರತಿ ಉತ್ತರ ಪತ್ರಿಕೆಗೆ	ರೂ. 280=00

ಇನ್ನಿತರ ವಿವರಗಳು:

೧. ಸದರ ಸೆಮಿಸ್ಟರ್‌ಗಳಲ್ಲಿ ಮರು ಮೌಲ್ಯಮಾಪನಕ್ಕಾಗಿ ಸಲ್ಲಿಸುವ ಅರ್ಜಿಗಳ ಜೊತೆಗೆ ಶುಲ್ಕ ಭರಿಸಿ ಚಲನ ಹಾಗೂ ಅಂತರ್‌ಜಾಲದಿಂದ ಪಡೆದ ಫಲಿತಾಂಶದ ಅಂಕ ಪಟ್ಟಿಯೊಂದಿಗೆ ಸಲ್ಲಿಸುವುದು. (ಮೂಲ ಅಂಕಪಟ್ಟಿಯ ಅವಶ್ಯವಿರುವುದಿಲ್ಲ).

೨. ಗರಿಷ್ಠ 2 ವಿಷಯಗಳಿಗೆ (ಉತ್ತರ ಪತ್ರಿಕೆಗಳಿಗೆ) ಮರು ಮೌಲ್ಯಮಾಪನ ಅರ್ಜಿ ಸಲ್ಲಿಸಬಹುದು. ಆದರೆ ಪ್ರಾಯೋಗಿಕ ಪರೀಕ್ಷೆ, ಪ್ರೌಢಪ್ರಬಂಧ (Dissertation), ಓ.ಎಂ.ಆರ್ ಮೂಲದ ಉತ್ತರ ಪತ್ರಿಕೆ, ಆಂತರಿಕ ವಿಷಯಗಳ ಮರುಮೌಲ್ಯಮಾಪನಕ್ಕೆ ಅವಕಾಶವಿರುವುದಿಲ್ಲ.

೩. ಸದರ ಮಾಹಿತಿಯನ್ನು ತಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರಲು ಸೂಚಿಸಲಾಗಿದೆ. ಮ್ಯಾನುವಲ್ ಅರ್ಜಿಗಳಿಗೆ ಅವಕಾಶವಿರುವುದಿಲ್ಲ.

ವಿ.ಸೂ: ಕೊನೆಯ ದಿನಾಂಕ ಮುಗಿದ ಎರಡು ದಿನಗಳೊಳಗಾಗಿ ಎಲ್ಲ ವಿದ್ಯಾರ್ಥಿಗಳಿಂದ ವಿವರವಾದ ಮಾಹಿತಿಯನ್ನು ಪಡೆದು ಕ್ರೋಢಿಕರಿಸಿ ಅಧೀಕ್ಷಕರು, ಮರು ಮೌಲ್ಯಮಾಪನ ವಿಭಾಗ, ಕೋಣೆ ಸಂಖ್ಯೆ: ೨೦೩, ಪರೀಕ್ಷಾ ವಿಭಾಗ ಕ.ವಿ.ವಿ. ಧಾರವಾಡ ಇವರಿಗೆ ನೀಡುವುದು ತಡವಾಗಿ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

Sd/- 29/10/2026
ಕುಲಸಚಿವರು (ಮೌಲ್ಯಮಾಪನ)

ಗೆ,

೧. ಸಂಬಂಧಪಟ್ಟ ಎಲ್ಲ ಮಹಾವಿದ್ಯಾಲಯಗಳ ಪ್ರಾಚಾರ್ಯರು/ವಿಭಾಗದ ಮುಖ್ಯಸ್ಥರು/ಕೋ-ಆರ್ಡಿನೇಟರುಗಳು
೨. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ ಕಚೇರಿ/ಕುಲಸಚಿವರ ಕಚೇರಿ/ವಿತ್ತಾಧಿಕಾರಿಗಳ ಕಚೇರಿ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
೩. ಸಹಾಯಕ ಕುಲಸಚಿವರು, ಉಪಕುಲಸಚಿವರು, ಪರೀಕ್ಷಾ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
೪. ಕುಲಸಚಿವರು (ಮೌಲ್ಯಮಾಪನ) ಇವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
೫. ಉಪಕುಲಸಚಿವರು, ವಿದ್ಯಾಮಂಡಳ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
೬. ನಿರ್ದೇಶಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕ.ವಿ.ವಿ.ಧಾರವಾಡ. ಇವರಿಗೆ ಅಂತರ್‌ಜಾಲದ ಮುಖಪುಟದಲ್ಲಿ ಪ್ರಕಟಣೆಗಾಗಿ.
೭. ಅಧೀಕ್ಷಕರು, ಸಾಮಾನ್ಯ ಆಡಳಿತ (ಪರೀಕ್ಷಾ) ವಿಭಾಗ, ಕ.ವಿ.ವಿ.ಧಾರವಾಡ ಇವರ ಮಾಹಿತಿಗಾಗಿ
೮. ಸಿಸ್ಟಮ್ ಎನಾಲಿಸ್ಟ್, ಗಣಕಯಂತ್ರ ವಿಭಾಗ, ಕ.ವಿ.ವಿ.ಧಾರವಾಡ ಇವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.